# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/517/2021-22.          ದಿನಾಂಕ 04/12/2021

ದಿನಾಂಕ: 04-12-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀಮತಿ. ಶಿಲ್ಪಾ.ಎನ್ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 6 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 7 | ಶ್ರೀ. ಪಿ.ನರಸಿಂಹಯ್ಯ | ಕಿರಿಯ ಆರೋಗ್ಯ ಪರಿವೀಕ್ಷಕರು | |
| 8 | ಶ್ರೀ. ಕೆ.ಸಿ.ಕೇಸರಿ | ಹಿರಿಯ ಆರೋಗ್ಯ ಪರಿವೀಕ್ಷಕರು | |
| 9 | ನವೀನ್ ಕುಮಾರ್.ಎಂ | ಬಿ.ಡಬ್ಲ್ಯೂ.ಎಸ್.ಎಸ್.ಬಿ | |

ದಿನಾಂಕ: 04-12-2021 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೋ.ಓ.ವಿ.ಜಯಕುಮಾರ್ ರವರು ಮಾತನಾಡಿ ವಾಸವಿ ದೇವಸ್ಥಾನದ ರಸ್ತೆ ಮತ್ತು ಎಂ.ಎಂ.ವಿ. ರಸ್ತೆಗಳು ಸೇರುವ ಸ್ಥಳದಲ್ಲಿರುವ ಒತ್ತು ಶ್ಯಾವಿಗೆ ಅಂಗಡಿಯವರು ಶ್ಯಾವಿಗೆಯನ್ನು ಪ್ಲಾಸ್ಟಿಕ್ ಕವರ್‌ನಲ್ಲಿ ಹಾಕಿ ಗ್ರಾಹಕರಿಗೆ ನೀಡುತ್ತಿರುತ್ತಾರೆ ಮತ್ತು ಪ್ಯಾಕೆಟ್ ಮೇಲೆ ತಯಾರಿಸಿದ ದಿನಾಂಕವನ್ನು ನಮೂದಿಸಿರುವುದಿಲ್ಲ ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದಾಗಿ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷರಿಗೆ ಕೂಡಲೇ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡಲ್ ಅಧಿಕಾರಿಗಳು ಸೂಚಿಸಿದರು ಆಗ ಈಗಾಗಲೇ ಅಂಗಡಿ ಮಾಲೀಕರಿಗೆ ಮಾರ್ಷಲ್ ಮುಖಾಂತರ ದಂಡ ವಿಧಿಸಲಾಗಿದ್ದು ಮುಂದೆಯೂ ಸಹ ಇದರ ಬಗ್ಗೆ ಸೂಕ್ತ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

ನಂತರ ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀಮತಿ. ಅಂಬಿಕಾ ಕೃಷ್ಣ ರವರು ಮಾತನಾಡಿ ಈ ಕೆಳಕಂಡ ವಿಷಯಗಳ ಬಗ್ಗೆ ಸೂಕ್ತ ಕ್ರಮಕೈಗೊಳ್ಳಬೇಕೆಂದು ಸಭೆಯಲ್ಲಿ ಕೋರಿದರು. ಅವುಗಳೆಂದರೆ:-

- ವಿ.ವಿ.ಪುರಂನ ಮಾರ್ಕೆಟ್ ರಸ್ತೆ (ಫುಡ್ ಸ್ಟ್ರೀಟ್) ಯಲ್ಲಿನ ಹೋಟೆಲ್‌ಗಳಲ್ಲಿ ಆಹಾರವನ್ನು ಸೇವಿಸಲು ಬರುವ ಗ್ರಾಹಕರು ತಮ್ಮ ವಾಹನಗಳನ್ನು ಎಲ್ಲೆಂದರಲ್ಲಿ ಹಾಗೂ ವಿ.ವಿ.ಪುರಂನ ನಿವಾಸಿಗಳ ಮನೆಯ ಮುಂದೆ ನಿಲ್ಲಿಸಿ ಹೋಗುವುದರಿಂದ ಸ್ಥಳೀಯರಿಗೆ ತುಂಬಾ ತೊಂದರೆಯಾಗುತ್ತಿರುವ ಬಗ್ಗೆ.

- ವಾಸವಿ ದೇವಸ್ಥಾನದ ರಸ್ತೆ ಸಜ್ಜನರಾವ್ ವೃತ್ತದಿಂದ 1 ಹೆಚ್.ಎಫ್.ಸಿ ಅಪಾರ್ಟ್‌ಮೆಂಟ್ ವರೆಗೆ ಬೀದಿ ದೀಪಗಳನ್ನು ಅಳವಡಿಸುವ ಬಗ್ಗೆ.
- ಜೈನ್ ಟೆಂಪಲ್ ರಸ್ತೆಯಲ್ಲಿ ಹಸುಗಳನ್ನು ಕಟ್ಟುತ್ತಿದ್ದು ಇದರಿಂದ ತೊಂದರೆಯಾಗುತ್ತಿರುವ ಬಗ್ಗೆ.
- ಡಯಾನಗಲ್ ರಸ್ತೆ ಭಾರತೀಯ ಸ್ಟೇಟ್ ಬ್ಯಾಂಕ್ ಮುಂಭಾಗದಲ್ಲಿ ರಸ್ತೆ ಉಬ್ಬು (Hump) ನ್ನು ಅಳವಡಿಸುವ ಬಗ್ಗೆ.
- ಡಯಾನಗಲ್ ರಸ್ತೆ ಹಾಗೂ ಕೆ.ಆರ್. ರಸ್ತೆಗಳಿಗೆ ಹೊಂದಿಕೊಂಡಂತಿರುವ ನ್ಯಾಷನಲ್ ಹೈ ಸ್ಕೂಲ್ ಮುಂಭಾಗ ಪಾಲಿಕೆಯ ಭಾಗದಲ್ಲಿ ಲೈಬ್ರರಿ ಹಾಗೂ ಮಕ್ಕಳ ಆಟಿಕೆ ಮೈದಾನವನ್ನು ನಿರ್ಮಿಸಿಕೊಡುವ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ ಸಂಬಂಧ ಪಟ್ಟಂತಹ ಇಲಾಖೆಗಳಾದ ಪೋಲಿಸ್ ಇಲಾಖೆ, ಬೀದಿ ದೀಪಗಳ ನಿರ್ವಹಣಾ ಇಲಾಖೆ, ಪಶುಸಂಗೋಪನಾ ಇಲಾಖೆ, ಟ್ರಾಫಿಕ್ ಇಂಜನಿಯರಿಂಗ್ ಸೆಲ್ ಇಲಾಖೆ ಮತ್ತು ವಾರ್ಡ್‌ನ ಕಾಮಗಾರಿ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸುವಂತೆ ತಿಳಿಸುವುದಾಗಿ ಸಭೆಯ ಗಮನಕ್ಕೆ ತಂದರು.

ಸದಸ್ಯರೆಲ್ಲರೂ ಸಭೆಯಲ್ಲಿ ವಾರ್ಡ್‌ನಲ್ಲಿ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ಪ್ರಸ್ತಾಪಿಸಿದಗ ಕಿರಿಯ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ರಸ್ತೆ ಅಭಿವೃದ್ಧಿ ಕಾಮಗಾರಿ, ಚರಂಡಿ ಅಭಿವೃದ್ಧಿ ಕಾಮಗಾರಿಗಳು ಅನುಮೋದನೆಗೊಂಡಿದ್ದು, ಅತಿ ಶೀಘ್ರದಲ್ಲಿ ಕಾಮಗಾರಿಗಳನದನು ಪ್ರಾರಂಭಿಸುವುದಾಗಿ ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ | ನೋಡಲ್ ಅಧಿಕಾರಿಗಳು |
| ಸಹಾಯಕ ಅಭಿಯಂತರರು | ವಾರ್ಡ್ ಸಂಖ್ಯೆ: 143 ಹಾಗೂ |
| ವಾರ್ಡ್ -143 ವಿ. ವಿ.ಪುರಂ | ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |